ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

6

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 9/7/2020

# ರಾಜ್ಯದಲ್ಲಿ ಕೊರೋನಾ ಸುನಾಮಿ

# 2062 ಕೇಸ್, 54 ಬಲಿ!

## ಒಂದೇ ದಿನ 2 ಸಾವಿರಕ್ಕೂ ಹೆಚ್ಚು ಮಂದಿಗೆ ಸೋಂಕು ದೃಢ। ಇದೇ ಮೊದಲು ರಾಜ್ಯದಲ್ಲಿ ಒಂದು ದಿನದಲ್ಲಿ 50ಕ್ಕೂ ಹೆಚ್ಚು ಸಾವುಗಳು ಸಂಭವಿಸಿ ಹೊಸ ದಾಖಲೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಬುಧವಾರ ಒಂದೇ ದಿನ 2 ಸಾವಿರಕ್ಕೂ ಹೆಚ್ಚು ಮಂದಿಗೆ ಕೊರೋನಾ ಸೋಂಕು ದೃಢಪಟ್ಟಿದೆ. ಅಲ್ಲದೆ, ಇದುವರೆಗಿನ ಅತಿ ಹೆಚ್ಚು 54 ಸಾವು ಸಹ ಸಂಭವಿಸಿದ್ದು, ಕರುನಾಡು ಕರೋನಾ ಕರಾಳ ಮುಷ್ಟಿಗೆ ಸಿಲುಕಿದಂತಾಗಿದೆ.

ಇದರೊಂದಿಗೆ ಸೋಂಕು ಮತ್ತು ಸಾವು ಎರಡರಲ್ಲೂ ಮಹಾಮಾರಿ ಕೊರೋನಾ ವೈರಸ್ ರಾಜ್ಯದಲ್ಲಿ ಹೊಸ ದಾಖಲೆ ಸೃಷ್ಟಿಸಿದೆ.

ಕಳೆದ ಜುಲೈ 5ರಂದು ರಾಜ್ಯದಲ್ಲಿ ಒಂದೇ ದಿನ 1925 ಕೊರೋನಾ ಸೋಂಕು ದೃಢಪಟ್ಟಿತ್ತು. ಜುಲೈ 4ರಂದು 42 ಮಂದಿ ಸೋಂಕಿತರು ಮೃತಪಟ್ಟಿದ್ದು, ಈವರೆಗಿನ ಏಕದಿನದ ದಾಖಲೆಯಾಗಿತ್ತು. ಇದೀಗ ಈ ದಾಖಲೆ ಪುಡಿಗಟ್ಟಿ ಬುಧವಾರ ರಾಜ್ಯದಲ್ಲಿ 2,062 ಮಂದಿಗೆ ಸೋಂಕು ದೃಢಪಟ್ಟಿದೆ. ಜತೆಗೆ ಕೋವಿಡ್ 54 ಬಲಿಪಡೆದಿದೆ. ಇದರೊಂದಿಗೆ ರಾಜ್ಯದ ಒಟ್ಟು ಸೋಂಕಿತರ ಸಂಖ್ಯೆ 28,877ಕ್ಕೆ, ಸಾವಿನ ಸಂಖ್ಯೆ 470ಕ್ಕೆ (4 ಅನ್ಯ ಕಾರಣದ ಸಾವು ಹೊರತುಪಡಿಸಿ) ಏರಿಕೆಯಾಗಿದೆ.

**ಬೆಂಗಳೂರಲ್ಲಿ 1148!:** ಬುಧವಾರದ ಪ್ರಕರಣಗಳ ಪೈಕಿ ಬೆಂಗಳೂರು ನಗರ ಒಂದರಲ್ಲೇ 1148 ಮಂದಿಗೆ ಸೋಂಕು ದೃಢಪಟ್ಟಿದೆ. ಉಳಿದಂತೆ ದಕ್ಷಿಣ ಕನ್ನಡ 183, ದಾವಣಗೆರೆ 89, ಕಲಬುರಗಿ 66, ಬೆಳಗಾವಿ, ಮೈಸೂರು ತಲಾ 59, ಬೆಂಗಳೂರು ಗ್ರಾಮಾಂತರ 37, ರಾಮನಗರ 34, ಚಿಕ್ಕಬಳ್ಳಾಪುರ 32, ಉಡುಪಿ, ಹಾವೇರಿ ತಲಾ 31, ಬೀದರ್ 29, ಬೆಳಗಾವಿ 27, ಹಾಸನ 26, ಬಾಗಲಕೋಟೆ, ತುಮಕೂರಲ್ಲಿ ತಲಾ 24 ಸೋಂಕು ಪತ್ತೆ ಆಗಿದೆ. ↘ 7

### ಇಷ್ಟೊಂದು ಆಗುತ್ತೆ ಅಂದುಕೊಂಡಿರಲಿಲ್ಲ



ಬೆಂಗಳೂರಿನಲ್ಲಿ ಲಾಕ್‌ಡೌನ್ ಸಡಿಲಿಕೆ ಬಳಿಕ ಸೋಂಕಿತರ ಪ್ರಮಾಣದಲ್ಲಿ ಹೆಚ್ಚಳವಾಗಲಿದೆ ಎಂಬುದು ಗೊತ್ತಿತ್ತು. ಆದರೆ ಅದು ಈ ಪ್ರಮಾಣದಲ್ಲಿ ಏರಿಕೆಯಾಗುತ್ತದೆ ಎಂಬ ಬಗ್ಗೆ ಮಾಹಿತಿ ಇರಲಿಲ್ಲ, ಪ್ರಸ್ತುತ ಇರುವ ಸೋಂಕಿತರ ಸಂಖ್ಯೆ ಜುಲೈ ತಿಂಗಳ ಅಂತ್ಯಕ್ಕೆ ಬರುತ್ತದೆ ಎಂಬ ಮಾಹಿತಿ ಇತ್ತು. ಆದರೆ, ಅದು ಶೀಘ್ರವಾಗಿ ಏರಿಕೆ ಕಂಡಿದೆ.

• ಡಾ। ಕೆ. ಸುಧಾಕರ್ ವೈದ್ಯಕೀಯ ಶಿಕ್ಷಣ ಸಚಿವ

### ಯಾವುದೇ ಸವಾಲು ಎದುರಿಸಲು ಸನ್ನದ್ಧ



ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಕೊರೋನಾ ತಡೆಗೆ ಸರ್ಕಾರ ಎಲ್ಲ ರೀತಿಯ ತಯಾರಿ ಮಾಡಿಕೊಳ್ಳುತ್ತಿದೆ. ಯಾವುದೇ ಸವಾಲನ್ನಾದರೂ ಎದುರಿಸಲು ಸಿದ್ಧವಾಗಿದೆ. ಜನರು ಆತಂಕ ಪಡಬಾರದು. ಇದ್ದಲ್ಲೇ ಇರಿ. ಊರಿಗೆ ಹೋದರೆ ಅಲ್ಲೂ ಹರಡುವ ಸಾಧ್ಯತೆ ಇದೆ. ಹಾಗಿ ಊರಿಗೆ ತೆರಳಬೇಡಿ.

• ಡಾ। ಸಿ.ಎನ್. ಅಶ್ವತ್ಥನಾರಾಯಣ ಉಪಮುಖ್ಯಮಂತ್ರಿ

## 778 ಜನ ಚೇತರಿಕೆ: ಇದೂ ದಾಖಲೆ!

ರಾಜ್ಯದಲ್ಲಿ ಬುಧವಾರ ದಾಖಲೆಯ 778 ಮಂದಿ ಗುಣಮುಖರಾಗಿದ್ದಾರೆ. ಈವರೆಗಿನ ಒಟ್ಟು 28,877 ಸೋಂಕು ಪ್ರಕರಣಗಳಲ್ಲಿ ಗುಣಮುಖರಾದವರ ಸಂಖ್ಯೆ 11,876ಕ್ಕೆ ಏರಿಕೆಯಾಗಿದೆ. ಸದ್ಯ 16,527 ಸಕ್ರಿಯ ಸೋಂಕಿತರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಈ ಪೈಕಿ 452 ಮಂದಿಯ ಆರೋಗ್ಯ ಸ್ಥಿತಿ ಗಂಭೀರವಾಗಿದೆ.

## ದೇಶದಲ್ಲಿ ನಿನ್ನೆ 25771 ಹೊಸ ಕೇಸ್, 480 ಮಂದಿ ಸಾವು ↘ 11

### ಶಾಸಕ ಶರತ್ ಬಚ್ಚೇಗೌಡ, ಪತ್ನಿಗೆ ಕೊರೋನಾ ದೃಢ

ಬೆಂಗಳೂರಿನ ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ, ಪತ್ನಿ ಪ್ರತಿಭಾಗೆ ಸೋಂಕು ದೃಢವಾಗಿದೆ. ಇದನ್ನು ಶರತ್ ಅವರೇ ವಿಡಿಯೋದಲ್ಲಿ ತಿಳಿಸಿದ್ದಾರೆ. ವಿವರ ↘ 9

### ಪಿಎಗೆ ಕೊರೋನಾ ಪಾಸಿಟಿವ್, ಕುಮಾರಸ್ವಾಮಿಗೆ ನೆಗೆಟಿವ್

ಚಿಕ್ಕಮಗಳೂರಿಗೆ ಹೋಗಿದ್ದ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ, ಅವರ ಚಾಲಕ ಸೋಂಕಿನಿಂದ ಪಾರಾಗಿದ್ದರೆ, ಪಿಎಗೆ ಸೋಂಕು ದೃಢಪಟ್ಟಿದೆ. ವಿವರ ↘ 9

### ರೇಣುಕಾಚಾರ್ಯ ಕಚೇರಿ ಸಿಬ್ಬಂದಿಗೂ ಕೊರೋನಾ

ಸಿಎಂ ರಾಜಕೀಯ ಕಾರ್ಯದರ್ಶಿ ರೇಣುಕಾಚಾರ್ಯ ಅವರ ಕಚೇರಿಯ ಸಿಬ್ಬಂದಿ ಹಾಗೂ ಐಎಎಸ್ ಅಧಿಕಾರಿಗೆ ಸೋಂಕು ದೃಢಪಟ್ಟಿದೆ. ವಿವರ ↘ 9

### ರಾಕ್‌ಲೈನ್ ವೆಂಕಟೇಶ್, ಪುತ್ರ, ಮೊಮ್ಮಗಗೆ ವೈರಸ್

ನಟ, ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ಅವರ ಮಗ ಮತ್ತು ಮೊಮ್ಮಗನಿಗೆ ಕೊರೋನಾ ಸೋಂಕು ದೃಢಪಟ್ಟಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ವಿವರ ↘ 9

### ಭೋಜೇಗೌಡ ಪಾಸಿಟಿವ್, ಸಚಿವ ಸಿ.ಟಿ.ರವಿ ಬಚಾವ್

ಎಂಎಲ್ಸಿ ಪ್ರಾಣೇಶ್ ಸಂಪರ್ಕದಲ್ಲಿದ್ದ ಎಂಎಲ್‌ಸಿ ಭೋಜೇಗೌಡಗೆ ಸೋಂಕು ದೃಢಪಟ್ಟಿದೆ. ಸಚಿವ ಸಿ.ಟಿ. ರವಿಗೆ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ. ವಿವರ ↘ 9

# 2062 ಕೇಸ್, 54 ಬಲಿ!

◀ ಮೊದಲ ಪುಟದಿಂದ

ಚಿಕ್ಕಮಗಳೂರು 23, ಉಡುಪಿ 20, ಉತ್ತರ ಕನ್ನಡ 19, ದಾವಣಗೆರೆ 18, ರಾಯಚೂರು, ಶಿವಮೊಗ್ಗ ತಲಾ 17, ಕೋಲಾರ 16, ಯಾದಗಿರಿ, ಕೊಪ್ಪಳ ತಲಾ 11, ಗದಗ 5, ವಿಜಯಪುರ 4, ಚಿತ್ರದುರ್ಗದಲ್ಲಿ 2 ಪ್ರಕರಣಗಳು ದಾಖಲಾಗಿವೆ. ಬುಧವಾರ 19,134 ಜನರನ್ನು ಪರೀಕ್ಷೆಗೆ ಒಳಪಡಿಸಲಾಗಿದೆ.

**ಬೆಂಗಳೂರಲ್ಲಿ ಸಾವಿನ ದಾಖಲೆ:** ಬುಧವಾರದ 54 ಸಾವಿನ ಪ್ರಕರಣಗಳಲ್ಲಿ ಬೆಂಗಳೂರು ನಗರ ಒಂದರಲ್ಲೇ 24 ಮಂದಿ ಸೋಂಕಿತರು ಮೃತಪಟ್ಟಿದ್ದಾರೆ. ಇದು ನಗರದಲ್ಲಿ ಈವರೆಗೆ ಒಂದೇ ದಿನದಲ್ಲಿ ದಾಖಲಾದ ಅತಿ ಹೆಚ್ಚು ಸಾವಿನ ಸಂಖ್ಯೆಯಾಗಿದೆ. ಉಳಿದಂತೆ ಧಾರವಾಡ 6, ಬಳ್ಳಾರಿ 4, ಚಿಕ್ಕಬಳ್ಳಾಪುರ, ರಾಯಚೂರು ತಲಾ 3, ತುಮಕೂರು, ಮೈಸೂರು, ಧಾರವಾಡ, ವಿಜಯಪುರ ತಲಾ 2, ಹಾಸನ, ಕಲಬುರಗಿ, ಬೀದರ್, ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಚಿಕ್ಕಮಗಳೂರಲ್ಲಿ ತಲಾ ಒಬ್ಬರು ಸೋಂಕಿನಿಂದ ಬಲಿಯಾಗಿದ್ದಾರೆ. ಇದರಲ್ಲಿ 41 ಐಎಲ್ಐ ಮತ್ತು ಸಾರಿ ಹಿನ್ನೆಲೆಯಿಂದ ಕೂಡಿವೆ. ಉಳಿದ 13 ಪ್ರಕರಣಗಳಲ್ಲಿ ಸೋಂಕಿಗೆ ಕಾರಣವೇ ಪತ್ತೆಯಾಗಿಲ್ಲ ಎಂದು ಆರೋಗ್ಯ ಇಲಾಖೆ ವರದಿ ಮಾಡಿದೆ.